**National**
**Kannada**
**18.08.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ವೈದ್ಯಕೀಯ ಸಮುದಾಯದ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ- ಸಚಿವ ಕಿರಣ್ ರಿಜಿಜು

೨. ೨೦೩೦ರ ವೇಳೆಗೆ ಜಾನುವಾರುಗಳ ಕಾಲುಬಾಯಿರೋಗ ಮುಕ್ತಗೊಳಿಸಲು ದೇಶೀಯ ಲಸಿಕೆ ಅಭಿವೃದ್ಧಿಗೆ ಕ್ರಮ

೩. ರಷ್ಯಾದ ಪೂರ್ವ ಕರಾವಳಿಯಲ್ಲಿ ೭.೦ ತೀವ್ರತೆಯ ಭೂಕಂಪ

೪. ಪ್ಯಾರಿಸ್ ಒಲಿಂಪಿಕ್ಸ್ ಮಹಿಳಾ ಕುಸ್ತಿಯಲ್ಲಿ ಫೈನಲ್ ಪ್ರವೇಶಿಸಿದ್ದ ವಿನೇಶ್ ಫೋಗಟ್‌ಗೆ ದೆಹಲಿಯಲ್ಲಿ ಅದ್ದೂರಿ ಸ್ವಾಗತ

<><*<><>*><>

ಕೊಲ್ಕತ್ತಾದ ವೈದ್ಯಕೀಯ ವಿದ್ಯಾರ್ಥಿನಿ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದ ಬಗ್ಗೆ ಇಡೀ ದೇಶ ಕಳವಳಗೊಂಡಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಭುವನೇಶ್ವರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ವೈದ್ಯಕೀಯ ಸಮೂಹದ ರಕ್ಷಣೆಗೆ ಬದ್ಧವಾಗಿದೆ. ಪಶ್ಚಿಮ ಬಂಗಾಳ ಸರ್ಕಾರದ ಬಗ್ಗೆ ಯಾವುದೇ ಆಕ್ರೋಶವಿಲ್ಲ. ಕೇಂದ್ರ ಆರೋಗ್ಯ ಇಲಾಖೆ ಈ ಘಟನೆ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

<><*<><>*><>

ಕೊಲ್ಕತ್ತಾ ವೈದ್ಯ ವಿದ್ಯಾರ್ಥಿನಿಯ ಮೇಲೆ ಲೈಂಗಿಕ ದೌರ್ಜನ್ಯವೆಸಗಿ, ಹತ್ಯೆ ಮಾಡಿದವರಿಗೆ ಉಗ್ರ ಶಿಕ್ಷೆಯಾಗಬೇಕು ಮತ್ತು ಆಸ್ಪತ್ರೆ ಮೇಲೆ ದಾಂಧಲೆ ಮಾಡಿದವರನ್ನು ಸಹ ತಕ್ಷಣವೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ವಿ.ಸಿ.ಎನ್.ಡಾಕ್ಟರ್ಸ್ ವೆಲ್ ಫೇರ್ ಅಸೋಸಿಯೇಷನ್ ಒತ್ತಾಯಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅಸೋಸಿಯೇಷನ್ ಅಧ್ಯಕ್ಷ ಡಾ.ಎಸ್. ರಾಜು, ಕೊಲ್ಕತ್ತಾ ಘಟನೆ ಅತ್ಯಂತ ಅಮಾನವೀಯವಾಗಿದ್ದು, ಈ ಷಡ್ಯಂತ್ರದ ಹಿಂದೆ ಇರುವವರನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಬೇಕು. ವೈದ್ಯಕೀಯ ಸಮೂಹದ ಮೇಲೆ ವಿಶ್ವಾಸ ಮೂಡುವ ರೀತಿಯಲ್ಲಿ ಸರ್ಕಾರ ಹೆಜ್ಜೆ ಇಡಬೇಕು ಎಂದು ಹೇಳಿದರು. ಎಲ್ಲಾ ರೀತಿಯ ಆರೋಗ್ಯ ಸೇವಾ ಸೌಲಭ್ಯಗಳು ಮತ್ತು ಸರ್ಕಾರಿ, ಖಾಸಗಿ ಚಿಕಿತ್ಸಾಲಯಗಳು ಆರೋಗ್ಯ ಸೇವೆಯಲ್ಲಿ ನಿರತರಾಗಿರುವ ವೈದ್ಯರು, ಆರೋಗ್ಯ ಸಿಬ್ಬಂದಿಗೆ ಸೂಕ್ತ ಭದ್ರತೆ ಒದಗಿಸಬೇಕು. ವೈದ್ಯರು ದೇವರ ಸಮಾನವಾಗಿದ್ದು, ರೋಗಿಗಳ ಜೀವ ರಕ್ಷಿಸುವ ವೈದ್ಯರನ್ನು ಗೌರವದಿಂದ ನೋಡುವ ಪರಿಸ್ಥಿತಿ ನಿರ್ಮಾಣವಾಗಬೇಕು ಎಂದು ಹೇಳಿದರು.

<><*<><>*><>

ಬರುವ ೨೦೩೦ ರ ವೇಳೆಗೆ ಕಾಲು ಮತ್ತು ಬಾಯಿ ರೋಗ ಮುಕ್ತಗೊಳಿಸುವ ಗುರಿ ಸಾಧನೆ ಹಿನ್ನೆಲೆಯಲ್ಲಿ ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್, ಇಲಾಖೆ ಕೈಗೊಂಡ ಕ್ರಮಗಳನ್ನು ನಿನ್ನೆ ಪರಿಶೀಲಿಸಿದರು. ಜಾನುವಾರು ವಲಯವು ಭಾರತದ ಆರ್ಥಿಕತೆಗೆ ಮಾತ್ರವಲ್ಲದೆ ರೈತರ ಜೀವನೋಪಾಯಕ್ಕೂ ನಿರ್ಣಾಯಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಭೆಯಲ್ಲಿ, ೨೦೩೦ ರ ವೇಳೆಗೆ ಭಾರತವನ್ನು ಕಾಲುಬಾಯಿ ರೋಗ ಮುಕ್ತಗೊಳಿಸುವ ಕ್ರಿಯಾ ಯೋಜನೆಯ ಕುರಿತು ಚರ್ಚಿಸಲಾಯಿತು. ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಉತ್ತರಾಖಂಡ, ಪಂಜಾಬ್, ಹರಿಯಾಣ, ಮಹಾರಾಷ್ಟ್ರ ಮತ್ತು ಗುಜರಾತ್ ಸೇರಿದಂತೆ ರಾಜ್ಯಗಳಲ್ಲಿ ಕಾಲು ಮತ್ತು ಬಾಯಿ ರೋಗ ಮುಕ್ತ ವಲಯಗಳನ್ನು ರಚಿಸಲು ಮೌಲ್ಯಮಾಪನ ನಡೆಸಲಾಗಿದೆ. ಪ್ರಾಣಿಗಳ ರೋಗಗಳು, ಅದರಲ್ಲೂ ಕಾಲು ಮತ್ತು ಬಾಯಿ ರೋಗ ಜಾನುವಾರು ವಲಯದ ಬೆಳವಣಿಗೆಗೆ ಗಮನಾರ್ಹ ತಡೆಗೋಡೆಯಾಗಿದೆ. ಇದು ವರ್ಷಕ್ಕೆ ಅಂದಾಜು ೨೪ ಸಾವಿರ ಕೋಟಿ ರೂಪಾಯಿಗಳ ಆರ್ಥಿಕ ನಷ್ಟವನ್ನು ಉಂಟುಮಾಡುತ್ತದೆ. ಈ ರೋಗವನ್ನು ನಿಯಂತ್ರಿಸುವುದು ಮತ್ತು

ನಿರ್ಮೂಲನೆ ಮಾಡುವುದರಿಂದ ಹಾಲು ಉತ್ಪಾದನೆಯನ್ನು ಹೆಚ್ಚಿಸುವುದಲ್ಲದೆ, ರೈತರ ಆದಾಯವನ್ನು ವೃದ್ಧಿಸಿ, ಅವರ ಜೀವನೋಪಾಯವನ್ನು ಅಭಿವೃದ್ಧಿ ಪಡಿಸುತ್ತದೆ ಎಂದು ರಂಜನ್ ಸಿಂಗ್ ಹೇಳಿದರು. ಎಲ್ಲಾ ಪ್ರಾಣಿಗಳ ಲಸಿಕೆಗಳನ್ನು ಐಸಿಎಆರ್ ಸಂಸ್ಥೆಗಳಿಂದ ಅಭಿವೃದ್ಧಿಪಡಿಸಲಾಗಿದೆ ಮತ್ತು ದೇಶೀಯವಾಗಿ ಉತ್ಪಾದಿಸಲಾಗುತ್ತದೆ ಎಂಬುದು ಹೆಮ್ಮೆಯ ವಿಷಯವಾಗಿದೆ ಎಂದು ರಂಜನ್ ಸಿಂಗ್ ಹೇಳಿದರು. ಭಾರತವು ಈಗ ಆಯ್ದ ಏಷ್ಯಾದ ದೇಶಗಳಿಗೆ ಲಸಿಕೆಗಳನ್ನು ರಫ್ತು ಮಾಡುವ ಸಾಮರ್ಥ್ಯವನ್ನು ಹೊಂದಿದೆ ಎಂದು ಮಾಹಿತಿ ನೀಡಿದ ಅವರು, ಎಫ್ಎಂಡಿ ವಿರುದ್ಧ ಪಶುಪಾಲಕ ಕುರಿ ಮತ್ತು ಮೇಕೆಗಳ ಲಸಿಕೆಯನ್ನು ರಾಷ್ಟ್ರವ್ಯಾಪಿ ವಿಸ್ತರಿಸಲಾಗಿದೆ. ಈಗಾಗಲೇ ಲಸಿಕೆ ಸರಬರಾಜು ಪ್ರಾರಂಭವಾಗಿದ್ದು, ಲಡಾಖ್ ಸರ್ಕಾರ ೧೦೦ ದಿನಗಳ ಕ್ರಿಯಾ ಯೋಜನೆಯ ಭಾಗವಾಗಿ ತನ್ನ ಹಿಂಡುಗಳಿಗೆ ಲಸಿಕೆ ಹಾಕಲು ಪ್ರಾರಂಭಿಸಿದೆ.

<><*<><>*><>

ಭಾರತದ ಆತಿಥ್ಯದಲ್ಲಿ ಮೂರನೇ ಆವೃತ್ತಿಯ "ವಾಯ್ಸ್ ಆಫ್ ಗ್ಲೋಬಲ್" ಶೃಂಗಸಭೆ ವರ್ಚುವಲ್ ಮೂಲಕ ನಿನ್ನೆ ಆರಂಭವಾಯಿತು. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಈ ಶೃಂಗಸಭೆ ನಡೆಯುತ್ತಿದ್ದು, "ಸುಸ್ಥಿರ ಭವಿಷ್ಯಕ್ಕಾಗಿ ಸಶಕ್ತ ಜಾಗತಿಕ ದಕ್ಷಿಣ" ಎಂಬುದು ಧ್ಯೇಯವಾಗಿದೆ. ಸಮಾವೇಶದಲ್ಲಿ ಎಲ್ಲಾ ಜಾಗತಿಕ ದಕ್ಷಿಣ ದೇಶಗಳ ನಾಯಕರು ಭಾಗವಹಿಸಿದ್ದಾರೆ. ಸಮಾವೇಶ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ, ಜಗತ್ತು ಇಂದು ಅನೇಕ ಜಟಿಲ ಸಮಸ್ಯೆಗಳನ್ನು ಎದುರಿಸುತ್ತಿದೆ. ಹವಾಮಾನ ಬದಲಾವಣೆ, ಆರೋಗ್ಯ, ಇಂಧನದ ಜೊತೆಗೆ ಭಯೋತ್ಪಾದನೆಯಂತಹ ಸವಾಲುಗಳು ಸಮಾಜದ ಅಭಿವೃದ್ಧಿಯ ಮೇಲೆ ಗಂಭೀರ ಪರಿಣಾಮ ಬೀರಿವೆ. ಇವುಗಳನ್ನು ಸಮರ್ಥವಾಗಿ ಎದುರಿಸಲು ದಕ್ಷಿಣ ದೇಶಗಳು ಒಗ್ಗಟ್ಟಾಗಿ ನಿಲ್ಲಬೇಕಾಗಿದೆ ಎಂದು ಕರೆ ನೀಡಿದರು. ಯುದ್ಧದ ಪರಿಸ್ಥಿತಿಯು ಅಭಿವೃದ್ಧಿಗೆ ಸವಾಲಾಗಿದೆ. ಇದೇ ರೀತಿ ಜಾಗತಿಕ ಮಟ್ಟದಲ್ಲಿ ಅನೇಕ ಬಗೆಯ ಸಂಘರ್ಷಗಳು ಮಾನವ ಕುಲಕ್ಕೆ ದೊಡ್ಡ ಸಂಕಷ್ಟಗಳನ್ನು ತಂದಿಡುತ್ತಿವೆ. ಇಂತಹ ಸವಾಲುಗಳಿಗೆ ಉತ್ತರಿಸಲು ದಕ್ಷಿಣ ದೇಶಗಳು ಪರಸ್ಪರ ಸಹಾಯ ಹಸ್ತ ಚಾಚಬೇಕಾಗಿದೆ. ಭಾರತ, ಸದಾ ದಕ್ಷಿಣ ದೇಶಗಳ ಜೊತೆಗಿರಲಿದೆ. ಈ ಜಾಗತಿಕ ದಕ್ಷಿಣ ಶೃಂಗಸಭೆಯಲ್ಲಿ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಚರ್ಚೆಯಾಗಬೇಕು ಎಂದರು. ನಂತರ ತಮ್ಮ ಸಮಾರೋಪ ಭಾಷಣದಲ್ಲಿ ಪ್ರಧಾನಿ ಮಾತನಾಡಿ, ಇಂದಿನ ಚರ್ಚೆಯು ಒಟ್ಟಾಗಿ ಮುನ್ನಡೆಯಲು ದಾರಿ ಮಾಡಿಕೊಟ್ಟಿದೆ. ಈ ಚರ್ಚೆಯು ಜಾಗತಿಕ ದಕ್ಷಿಣ ರಾಷ್ಟ್ರಗಳು ನಿಗದಿಪಡಿಸಿದ ಗುರಿಗಳನ್ನು ಸಾಧಿಸುವ ಪ್ರಯತ್ನಗಳನ್ನು ಉತ್ತೇಜಿಸುತ್ತದೆ ಎಂದ ಅವರು ಭಾರತದ ಪರವಾಗಿ ಸಮಗ್ರ ಜಾಗತಿಕ ಅಭಿವೃದ್ಧಿ ಒಪ್ಪಂದವನ್ನು ಪ್ರಸ್ತಾಪಿಸಿದರು. ವ್ಯಾಪಾರ ಪ್ರಚಾರ ಚಟುವಟಿಕೆಗಳನ್ನು ಬಲಪಡಿಸಲು ಭಾರತವು ೨.೫ ದಶಲಕ್ಷ ಡಾಲರ್ ನಿಧಿಯನ್ನು ನೀಡಲಿದೆ. ವ್ಯಾಪಾರ ನೀತಿ ಮತ್ತು ವ್ಯಾಪಾರ ಮಾತುಕತೆಗಳಲ್ಲಿ ಸಾಮರ್ಥ್ಯ ವೃದ್ಧಿಗಾಗಿ ತರಬೇತಿಯನ್ನು ನೀಡಲಾಗುವುದು, ಇದಕ್ಕಾಗಿ ಭಾರತವು ೧ ಮಿಲಿಯನ್ ಡಾಲರ್ ನಿಧಿಯೊಂದಿಗೆ ಕೊಡುಗೆ ನೀಡುತ್ತದೆ. ಸುಸ್ಥಿರ ಭವಿಷ್ಯಕ್ಕಾಗಿ ಸಶಕ್ತ ಜಾಗತಿಕ ದಕ್ಷಿಣ ಎಂಬುದು ಸಮಾವೇಶದ ಘೋಷವಾಕ್ಯವಾಗಿದೆ ಎಂದರು.

<><*<><>*><>

ವಿದೇಶಾಂಗ ಸಚಿವ ಎಸ್ ಜೈಶಂಕರ್ ಇಂದು ಕುವೈತ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಡಾ ಜೈಶಂಕರ್, ತಮ್ಮ ಕುವೈತ್ ಸಹವರ್ತಿ ಅಬ್ದುಲ್ಲಾ ಅಲಿ ಅಲ್-ಯಾಹ್ಯಾ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು, ಎರಡೂ ದೇಶಗಳ ನಡುವಿನ ರಾಜಕೀಯ, ವ್ಯಾಪಾರ, ಹೂಡಿಕೆ, ಇಂಧನ, ಭದ್ರತೆ, ಸಾಂಸ್ಕೃತಿಕ, ದೂತಾವಾಸ ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಪರಿಶೀಲಿಸಲು ಎರಡೂ ದೇಶಗಳಿಗಳಿಗೆ ಅನುವು ಮಾಡಿಕೊಡುತ್ತದೆ. ಇದಲ್ಲದೆ, ದ್ವಿಪಕ್ಷೀಯ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ವಿಷಯಗಳು, ಮಧ್ಯಪ್ರಾಚ್ಯ ಮತ್ತು ದಕ್ಷಿಣ ಏಷ್ಯಾದಲ್ಲಿ ಉದ್ಭವಿಸುತ್ತಿರುವ ಭೌಗೋಳಿಕ ರಾಜಕೀಯ ಭೂದೃಶ್ಯವನ್ನು ಸಮರ್ಥವಾಗಿ ಪರಿಹರಿಸುವತ್ತ ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

<><*<><>*><>

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಚೆನ್ನೈನಲ್ಲಿ ಭಾರತೀಯ ಕರಾವಳಿ ಕಾವಲು ಪಡೆಯ ಅತ್ಯಾಧುನಿಕ ಕರಾವಳಿ ರಕ್ಷಣಾ ಸಮನ್ವಯ ಕೇಂದ್ರಕ್ಕೆ ಚಾಲನೆ ನೀಡಿದರು. ನಂತರ ಅವರು ಸಾಗರ ಮಾಲಿನ್ಯ ಪ್ರತಿಕ್ರಿಯಾ ಕೇಂದ್ರವನ್ನು ಶುಭಾರಂಭ ಮಾಡಿದರು. ಈ ಹೊಸ ಸೌಕರ್ಯಗಳಿಂದ ಸಾಗರ ವಲಯದ ಭದ್ರತೆಯನ್ನು ಹೆಚ್ಚಿಸುವ ಜೊತೆಗೆ ತುರ್ತು ಪರಿಸ್ಥಿತಿಗಳಿಗೆ ಸಮರ್ಥವಾಗಿ ಪ್ರತಿಕ್ರಿಯೆ ನೀಡುವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿದಂತಾಗಿದೆ. ನಂತರ ತಮಿಳುನಾಡು ಮಾಜಿ ಮುಖ್ಯಮಂತ್ರಿ ದಿವಂಗತ ಎಂ. ಕರುಣಾನಿಧಿ ಅವರ ಸ್ಮರಣಾರ್ಥ ನಾಣ್ಯವನ್ನು ಬಿಡುಗಡೆ ಮಾಡಿದರು.

<><*<><>*><>

ಕರ್ನಾಟಕದ ತುಂಗಭದ್ರಾ ಜಲಾಶಯದ ೧೯ನೇ ಗೇಟ್‌ಗೆ ಸ್ಟಾಪ್ ಲಾಕ್ ಗೇಟ್ ಅಳವಡಿಸುವ ಕಾರ್ಯ ಪೂರ್ಣಗೊಂಡಿದೆ. ನಿನ್ನೆ ತುಂಗಭದ್ರಾ ಜಲಾಶಯದ ಎಲ್ಲಾ ಗೇಟ್ ಗಳನ್ನ ಬಂದ್ ಮಾಡುವ ಮೂಲಕ ಜಲಾಶಯಕ್ಕೆ ಹರಿಸಲಾಗುತ್ತಿದ್ದ ನೀರನ್ನು ನಿಲ್ಲಿಸಲಾಗಿದೆ. ಹೀಗಾಗಿ ಜಲಾಶಯದಲ್ಲಿ ೭೦ ಟಿಎಂಸಿ ನೀರು ಸಂಗ್ರಹವಿದೆ ಎಂದು ನಮ್ಮ ಕೊಪ್ಪಳ ಪ್ರತಿನಿಧಿ ವರದಿ ಮಾಡಿದ್ದಾರೆ. ಈ ಮಧ್ಯೆ ಜಲಸಂಪನ್ಮೂಲ ಇಲಾಖೆಯ ಜವಾಬ್ದಾರಿ ಹೊತ್ತಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸ್ಟಾಪ್‌ಲಾಕ್ ಗೇಟ್ ಅಳವಡಿಸಿದ ತಜ್ಞರ ತಂಡವನ್ನು ಅಭಿನಂದಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮತಿ ನೀಡಿರುವುದನ್ನು ರಾಜ್ಯ ಸಚಿವ ಸಂಪುಟ ಸಭೆ ಟೀಕಿಸಿದೆ. ರಾಜ್ಯಪಾಲರ ನಡೆ ರಾಜಕೀಯ ಪ್ರೇರಿತ ಎಂದು ಟೀಕಿಸಿದೆ. ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಮ್ಮ ವಿರುದ್ಧ ತನಿಖೆ ನಡೆದಿಲ್ಲ. ತನಿಖೆಯಲ್ಲಿ ತಮ್ಮ ಪಾತ್ರದ ಬಗ್ಗೆ ಉಲ್ಲೇಖವಿಲ್ಲ. ತಮ್ಮ ಸರ್ಕಾರದ ಅವಧಿಯಲ್ಲಿ ನಡೆದ ಹಗರಣ ಇದಲ್ಲ. ಹೀಗಿರುವಾಗ ತಾವು ರಾಜೀನಾಮೆ ನೀಡುವ ಅಗತ್ಯವಿಲ್ಲ. .ರಾಜ್ಯಪಾಲರ ವಿರುದ್ಧ ಕಾನೂನು ಹೋರಾಟ ನಡೆಸಲು ಸಚಿವ ಸಂಪುಟ ಸಭೆ ನಿರ್ಣಯಿಸಿದೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ಕೊಟ್ಟಿರುವುದು ಸರಿಯಲ್ಲ. ಪಕ್ಷ, ಇಡೀ ಸಂಪುಟ ಮುಖ್ಯಮಂತ್ರಿಗಳ ಪರವಾಗಿ ನಿಂತು ನ್ಯಾಯಕ್ಕಾಗಿ ಹೋರಾಡುತ್ತೇವೆ ಎಂದರು.

<><*<><>*><>

ರಷ್ಯಾದ ಪೂರ್ವ ಕರಾವಳಿಯಲ್ಲಿ ೭.೦ ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಅಮೆರಿಕದ ಜಿಯೋಲಾಜಿಕಲ್ ಸರ್ವೆ ವರದಿ ಮಾಡಿದೆ. ಸ್ಥಳೀಯ ಕಾಲಮಾನ ಇಂದು ಮುಂಜಾನೆ ಭೂಕಂಪ ಸಂಭವಿಸಿದ್ದು, ಸುಮಾರು ೧.೮೧ ಲಕ್ಷ ಜನಸಂಖ್ಯೆಯನ್ನು ಹೊಂದಿರುವ ಪೆಟ್ರೋಪಾವ್ಲೋವ್ಸ್ಕ-ಕಮ್ಚಾಟ್ಸ್ಕಿಯಿಂದ ೮೮ ಕಿ.ಮೀ ದೂರದಲ್ಲಿ ಭೂಕಂಪನ ಸಂಭವಿಸಿದೆ. ೪೮ ಕಿಮೀ ಆಳದಲ್ಲಿ ಭೂಕಂಪ ಸಂಭವಿಸಿದ್ದು, ಭೂಕಂಪದ ಕೇಂದ್ರವನ್ನು ೫೨.೮ ಡಿಗ್ರಿ ಉತ್ತರ ಅಕ್ಷಾಂಶ ಮತ್ತು ೧೬೦.೧೫ ಡಿಗ್ರಿ ಪೂರ್ವ ರೇಖಾಂಶದಲ್ಲಿ ಗುರುತಿಸಲಾಗಿದೆ. ರಷ್ಯಾದ ಕರಾವಳಿಯಲ್ಲಿ ಭೂಕಂಪದ ಕೇಂದ್ರಬಿಂದುವಿನ ೩೦೦ ಕಿಲೋಮೀಟರ್‌ಗಳ ಒಳಗೆ ಅಪಾಯಕಾರಿ ಸುನಾಮಿ ಅಲೆಗಳು ಸಂಭವಿಸಬಹುದು ಎಂದು ಅಮೆರಿಕದ ಯುಎಸ್ ಸುನಾಮಿ ಎಚ್ಚರಿಕೆ ವ್ಯವಸ್ಥೆಯು- ಯು ಎಸ್ ಜಿ ಎಸ್ ಆರಂಭದಲ್ಲಿ ಎಚ್ಚರಿಸಿತ್ತು

<><*<><>*><>

ಪ್ಯಾರಿಸ್ ಒಲಿಂಪಿಕ್ಸ್ ಕುಸ್ತಿಯ ಮಹಿಳಾ ವಿಭಾಗದ ಫೈನಲ್ ಪ್ರವೇಶಿಸಿದ ಏಕೈಕ ಭಾರತೀಯ ಮಹಿಳೆ ಎಂಬ ಖ್ಯಾತಿಗೆ ಭಾಜನರಾಗಿರುವ ವಿನೇಶ್ ಫೋಗಟ್ ನಿನ್ನೆ ಭಾರತಕ್ಕೆ ವಾಪಸಾದರು. ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿನೇಶ್ ಫೋಗಟ್ ಅವರನ್ನು ಅಭಿಮಾನಿಗಳು, ಕುಸ್ತಿಪಟುಗಳು, ಕುಟುಂಬ ಸದಸ್ಯರು ಆತ್ಮೀಯವಾಗಿ ಬರಮಾಡಿಕೊಂಡರು. ತಮಗೆ ದೊರೆತ ಅದ್ಧೂರಿ ಸ್ವಾಗತದಿಂದ ವಿನೇಶ್ ಫೋಗಟ್ ಪುಳಕಿತರಾದರು. ಫೈನಲ್‌ನಲ್ಲಿ ಕೇವಲ ೧೦೦ ಗ್ರಾಂ ತೂಕ ಹೆಚ್ಚಾದ ಕಾರಣಕ್ಕೆ ಅವರನ್ನು ಅನರ್ಹಗೊಳಿಸಲಾಗಿತ್ತು. ಆದರೆ ಭಾರತವಷ್ಟೆ ಅಲ್ಲ ಜಗತ್ತಿನ ಕ್ರೀಡಾ ಪ್ರೇಮಿಗಳ ಹೃದಯ ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>